**ಕರ್ನಾಟಕ ಸರ್ಕಾರ**
**ಸಹಕಾರ ಚುನಾವಣಾ ಪ್ರಾಧಿಕಾರ**

ಸಂಖ್ಯೆ: ಸಚುಪ್ರಾ/ರಿಅನೇ-ಆಮಂ/ಬೆಂ/82/2016

3ನೇ ಮಹಡಿ, ಶಾಂತಿನಗರ ಟಿ.ಟಿ.ಎಂ.ಸಿ 'ಬಿ' ಬ್ಲಾಕ್,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027
ದಿನಾಂಕ:17.03.2016

ವಿಷಯ: ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ಆಡಳಿತ ಮಂಡಲಿ ಸಾಮಾನ್ಯ ಚುನಾವಣೆಗೆ ಮತ್ತು ಪದಾಧಿಕಾರಿಗಳ ಸ್ಥಾನಗಳಿಗೆ ಚುನಾವಣೆ ನಡೆಸಲು ರಿಟರ್ನಿಂಗ್ ಆಫೀಸರ್ ನೇಮಕಾತಿ ಬಗ್ಗೆ.

## ಆದೇಶ

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 39ಎ(1) ಮತ್ತು 39ಎಎ(2) ಅಡಿಯಲ್ಲಿ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 26ಎ ಹಾಗೂ ಸೌಹಾರ್ದ ಸಹಕಾರಿ ನಿಯಮಗಳು 2004 ರ ನಿಯಮ 6ರ ಅಡಿಯಲ್ಲಿ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ॥ ರಾಜ್ ಕುಮಾರ್ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10** ಇದರ ಆಡಳಿತ ಮಂಡಲಿಯ ಮುಂದಿನ ಅವಧಿಗೆ ಅಂದರೆ, ಚುನಾವಣಾ ದಿನಾಂಕದಿಂದ ಮುಂದಿನ 5 ವರ್ಷಗಳ ಅವಧಿಗೆ ಚುನಾವಣೆ ನಡೆಸಲು ಮತ್ತು ಚುನಾವಣೆ ನಂತರ ಪದಾಧಿಕಾರಿಗಳ ಚುನಾವಣೆ ನಡೆಸಲು **ಶ್ರೀ ಬಿ ವೆಂಕಟೇಶ್, ಕ.ಆ.ಸೇ, ವಿಶೇಷ ಭೂ ಸ್ವಾಧೀನ ಅಧಿಕಾರಿಗಳು, ಕೆ.ಐ.ಎ.ಡಿ.ಬಿ, ಬೆಂಗಳೂರು** ರವರನ್ನು ರಿಟರ್ನಿಂಗ್ ಆಫೀಸರ್ ಆಗಿ ನೇಮಿಸಿ ಆದೇಶಿಸಿದೆ.

**ರಿಟರ್ನಿಂಗ್ ಆಫೀಸರ್ ಕೆಳಕಂಡ ನಿರ್ದೇಶನಗಳನ್ನು ಪಾಲನೆ ಮಾಡಲು ಸೂಚಿಸಿದೆ:**

1. ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ಮತ್ತು ಸಹಕಾರಿಯ ಉಪವಿಧಿಗಳನ್ನು ಅನುಸರಿಸಿ ಪಾರದರ್ಶಕವಾಗಿ ಚುನಾವಣೆ ನಡೆಸತಕ್ಕದ್ದು.
2. ಸಹಕಾರ ಚುನಾವಣಾ ಪ್ರಾಧಿಕಾರವು ಹೊರಡಿಸಿರುವ ಮಾರ್ಗಸೂಚಿ ಮತ್ತು ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸತಕ್ಕದ್ದು.
3. ಚುನಾವಣೆ ಪ್ರಕ್ರಿಯೆಯ ಪ್ರತಿಯೊಂದು ಹಂತದ ವಿವರಗಳನ್ನು ಕಾಲಕಾಲಕ್ಕೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ವರದಿ ಮಾಡತಕ್ಕದ್ದು.
4. ರಿಟರ್ನಿಂಗ್ ಆಫೀಸರ್ ಎಂದು ನೇಮಕಗೊಂಡ ಅಧಿಕಾರಿ/ನೌಕರರು ಚುನಾವಣೆ ಪೂರ್ಣಗೊಳ್ಳುವವರೆಗೆ ಪ್ರಾಧಿಕಾರದ ನಿಯಂತ್ರಣಕ್ಕೆ ಒಳಪಟ್ಟಿದ್ದು ಪ್ರಾಧಿಕಾರದ ನಿರ್ದೇಶನದಂತೆ ಕಾರ್ಯ ನಿರ್ವಹಿಸತಕ್ಕದ್ದು ಹಾಗೂ **ಚುನಾವಣೆ ಮುಗಿದನಂತರ ಫಲಿತಾಂಶದ ಪ್ರತಿಯನ್ನು ನಿಗಧಿತ ನಮೂನೆಗಳಲ್ಲಿ ಸಿದ್ದಪಡಿಸಿ ಚುನಾವಣಾಧಿಕಾರಿಗೆ ಮತ್ತು ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.**

ಈ ಆದೇಶವನ್ನು ನನ್ನ ಸ್ವಹಸ್ತ ಮತ್ತು ಮೊಹರಿನೊಡನೆ ಹೊರಡಿಸಲಾಗಿದೆ.

ಸಹಕಾರ ಚುನಾವಣಾ ಪ್ರಾಧಿಕಾರ ಆಯುಕ್ತರು ಬೆಂಗಳೂರು

(ಎನ್.ಸಿ. ಮುನಿಯಪ್ಪ)
ಆಯುಕ್ತರು

ಇವರಿಗೆ:

**ಶ್ರೀ ಬಿ ವೆಂಕಟೇಶ್, ಕ.ಆ.ಸೇ, ವಿಶೇಷ ಭೂ ಸ್ವಾಧೀನ ಅಧಿಕಾರಿಗಳು, ಕೆ.ಐ.ಎ.ಡಿ.ಬಿ, ಬೆಂಗಳೂರು- ರಿಟರ್ನಿಂಗ್ ಆಫೀಸರ್**

ಪ್ರತಿಗಳು:

1. ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿ, ಬೆಂಗಳೂರು ವಿಭಾಗ ರವರಿಗೆ ಸೂಕ್ತ ಕ್ರಮಕ್ಕಾಗಿ
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52
3. ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ, ಬೆಂಗಳೂರು
4. ಸಹಕಾರ ಸಂಘಗಳ ಉಪ ನಿಬಂಧಕರು, ಬೆಂಗಳೂರು ಉತ್ತರ ವಲಯ, 2ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಕಟ್ಟಡ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
5. ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಂಗಳೂರು ಉತ್ತರ ವಲಯ, 2ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಕಟ್ಟಡ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ॥ ರಾಜ್ ಕುಮಾರ್ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10 ಇವರಿಗೆ ಕಳುಹಿಸುತ್ತಾ, ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ಹಾಗೂ ಸಹಕಾರ ಚುನಾವಣಾ ಪ್ರಾಧಿಕಾರದ ನಿರ್ದೇಶನಗಳ ರೀತ್ಯಾ ಕಾರ್ಯನಿರ್ವಹಿಸಿ ರಿಟರ್ನಿಂಗ್ ಆಫೀಸರ್‌ಗೆ ಪೂರ್ಣ ಪ್ರಮಾಣದಲ್ಲಿ ನೆರವು ನೀಡತಕ್ಕದ್ದು.